ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 14–1–2015

## ಪತ್ರಿಕಾ ಪ್ರಕಟಣೆ

# ಅನಿಲ ರಹಿತ ಬಿ.ಪಿ.ಎಲ್ ಕುಟುಂಬಗಳಿಗೆ ಸಿಎಸ್‌ಆರ್ ಯೋಜನೆಯಡಿ ಹೊಸ ಅನಿಲ ಸಂಪರ್ಕ

ಬೆಂಗಳೂರು, ಜನವರಿ 14 (ಕರ್ನಾಟಕ ವಾರ್ತೆ)

ಸೀಮೆಎಣ್ಣೆ ಬಳಕೆಯಿಂದ ಉಂಟಾಗುತ್ತಿರುವ ಪರಿಸರ ಮಾಲಿನ್ಯ ಸಮಸ್ಯೆಗೆ ಪರಿಹಾರವಾಗಿ, ಕೇಂದ್ರ ಸರ್ಕಾರದ ಸಿಎಸ್‌ಆರ್ ಯೋಜನೆಯಡಿ ಅನಿಲ ರಹಿತ ಬಿಪಿಎಲ್ ಕುಟುಂಬಗಳಿಗೆ ಹೊಸ ಅನಿಲ ಸಂಪರ್ಕ ಒದಗಿಸಲು ಉದ್ದೇಶಿಸಲಾಗಿದೆ.

ಕೇಂದ್ರ ಸರ್ಕಾರವು ಸಿ.ಎಸ್.ಆರ್. ನಿಧಿ ಯೋಜನೆಯಡಿ (ವರ್ಗಾಯಿಸಲ್ಪಡದ) ಸಿಂಗಲ್ ಸಿಲಿಂಡರ್ ಅನಿಲ ಸಂಪರ್ಕವನ್ನು ನೀಡಲಿದ್ದು, ಇದರಲ್ಲಿ ಒಂದು ಸಿಲಿಂಡರ್ ಭದ್ರತಾ ಠೇವಣಿ ರೂ 1450/– ಮತ್ತು ಪ್ರೆಷರ್ ರೆಗ್ಯುಲೇಟರ್ ವೆಚ್ಚ ರೂ. 150/– ಒಳಗೊಂಡಿರುತ್ತದೆ. ಉಳಿದಂತೆ ಗ್ಯಾಸ್ ರೀಫಿಲ್, ಸುರಕ್ಷಾ ಗ್ಯಾಸ್ ಪೈಪ್, 1 ಬರ್ನರ್ ಸ್ಟೌವ್‌ಗಳ ವೆಚ್ಚವನ್ನು ಗ್ರಾಹಕರು ಭರಿಸಬೇಕಾಗಿರುತ್ತದೆ.

ಕೇಂದ್ರ ಸರ್ಕಾರದಿಂದ ನಗರ/ಪಟ್ಟಣ ಪ್ರದೇಶದ ಅನಿಲ ರಹಿತ ಬಿಪಿಎಲ್ ಕುಟುಂಬಗಳಿಗೆ ಅನಿಲ ಸಂಪರ್ಕ ನೀಡುವ ಉದ್ದೇಶದಿಂದ ಸಿಎಸ್‌ಆರ್ ನಿಧಿ ಯೋಜನೆ ಯಡಿ 2.80 ಕೋಟಿ ಅನುದಾನ ಬಿಡುಗಡೆಯಾಗಿದೆ. ಈ ಯೋಜನೆಯಡಿ 15000 ಅನಿಲ ಸಂಪರ್ಕಗಳನ್ನು ಒದಗಿಸಬಹುದಾಗಿದ್ದು ಬೆಂಗಳೂರು ನಗರದ ಪ್ರದೇಶದಲ್ಲಿ 331446 ಬಿಪಿಎಲ್ ಅನಿಲ ರಹಿತ ಪಡಿತರ ಚೀಟಿಗಳಿರುವುದರಿಂದ ಅರ್ಹ ಅತೀ ಕಡುಬಡವರಿಗೆ ಆದ್ಯತೆ ಮೇರೆಗೆ ಅನಿಲ ಸಂಪರ್ಕ ಒದಗಿಸಲು ಕ್ರಮವಹಿಸಲಾಗುವುದು.

ಕೇಂದ್ರ ಸರ್ಕಾರದ ಸೂಚನೆಯನ್ವಯ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯಿಂದ ಬಿಪಿಎಲ್ ಅನಿಲ ರಹಿತ ಪಡಿತರ ಚೀಟಿಗಳ ಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಪ್ರಕಟ ಪಡಿಸಲಾಗುವುದು. ಆಸಕ್ತ ಅನಿಲ ರಹಿತ ಪಡಿತರ ಚೀಟಿದಾರರು ಹತ್ತಿರದ ಗ್ಯಾಸ್ ಏಜೆನ್ಸಿಯವರನ್ನು ಸಂಪರ್ಕಿಸಿ ಪಡಿತರ ಚೀಟಿಯ ಪ್ರತಿ ಹಾಗೂ ಅಗತ್ಯ ದಾಖಲಾತಿಗಳೊಂದಿಗೆ ಹೆಸರು ನೋಂದಾಯಿಸಿಕೊಳ್ಳಬೇಕು. ನಂತರ ಈ ಬಿಪಿಎಲ್ ಕಾರ್ಡುದಾರರ ಪಟ್ಟಿಯನ್ನು ಇಲಾಖೆಯಿಂದ ದೃಢೀಕರಿಸಿಕೊಳ್ಳಬೇಕು. ಏಜೆನ್ಸಿ ವತಿಯಿಂದ ಪಡಿತರ ಚೀಟಿದಾರರ ಮನೆಗೆ ಭೇಟಿ ನೀಡಿ ಸುರಕ್ಷತಾ ನಿಯಮ ಅಳವಡಿಸಿಕೊಂಡಿರುವ ಬಗ್ಗೆ ಪರಿಶೀಲಿಸಿ ಸಂಪರ್ಕ ನೀಡಲು ಕ್ರಮ ವಹಿಸಲಾಗುವುದು.

ಈ ಯೋಜನೆಯು 2015 ನೇ ಮಾರ್ಚ್ ಮಾಹೆಯಲ್ಲಿ ಅಂತ್ಯಗೊಳ್ಳಲಿದ್ದು, ಈ ಅವಧಿಯೊಳಗೆ ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆದುಕೊಳ್ಳುವಂತೆ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಪ್ರಕಟಣೆ ತಿಳಿಸಿದೆ.

ಪಹೊ:ಜಿಪಿಆರ್.

## ಸಹಾಯಕ ಮೆಕ್ಯಾನಿಕಲ್ ಇಂಜಿನಿಯರ್ ನೇಮಕಾತಿ : ಮೂಲ ದಾಖಲೆ ಪರಿಶೀಲನೆ

**ಬೆಂಗಳೂರು, ಜನವರಿ 14 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ: 25–08–2015 ರಲ್ಲಿ ಅಧಿಸೂಚಿಸಲಾದ ಜಲ ಸಂಪನ್ಮೂಲ ಇಲಾಖೆಯಲ್ಲಿನ ಸಹಾಯಕ ಇಂಜಿನಿಯರ್ (ಮೆಕ್ಯಾನಿಕಲ್) 40 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ದಿನಾಂಕ 20–01–2015 ರಂದು ಬೆಳಿಗ್ಗೆ 9–30 ಗಂಟೆಗೆ ಮೂಲ ದಾಖಲಾತಿಗಳ ಪರಿಶೀಲನೆಯನ್ನು ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರಗಳನ್ನು ಈಗಾಗಲೇ ಕಳುಹಿಸಲಾಗಿದೆ. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದ ಅಭ್ಯರ್ಥಿಗಳ ಪಟ್ಟಿ, ಪರಿಶೀಲನೆಯ ವೇಳೆ ಮತ್ತು ದಿನಾಂಕ, ಇತ್ಯಾದಿ ವಿವರಗಳನ್ನು ಮಾಹಿತಿಗಾಗಿ ಆಯೋಗದ ವೆಬ್‌ಸೈಟ್ "http://kpsc.kar.ni.cin/Home Page" ರಲ್ಲಿ ಪ್ರಕಟಿಸಲಾಗಿದೆ.

ಅರ್ಹ ಅಭ್ಯರ್ಥಿಗಳಿಗೆ ಸೂಚನಾ ಪತ್ರ ತಲುಪದಿದ್ದಲ್ಲಿ ಸಂಬಂಧಿತ ದಾಖಲೆಗಳೊಂದಿಗೆ ಆಯೋಗದ ಕೇಂದ್ರ ಕಚೇರಿಯನ್ನು ಮೂಲ ದಾಖಲಾತಿಗಳ ಪರಿಶೀಲನೆಗೆ ನಿಗದಿಪಡಿಸಿರುವ ದಿನಾಂಕದೊಳಗೆ ಸಂಪರ್ಕಿಸಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಪಹೊ:ಜಿಪಿಆರ್.

## ತಾತ್ಕಾಲಿಕ ಪಟ್ಟಿ ಪ್ರಕಟ

**ಬೆಂಗಳೂರು, ಜನವರಿ 14 (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು ವಾರ್ತಾ ಇಲಾಖೆಯಲ್ಲಿ ಹಿರಿಯ ಸಹಾಯಕ ನಿರ್ದೇಶಕರ 5 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಆಯೋಗದ ಅಂತರ್ಜಾಲ http://kpsc.kar.nic.in/Selection List" ರಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಕಟಿಸಿದೆ.

ತಾತ್ಕಾಲಿಕ ಆಯ್ಕೆ ಪಟ್ಟಿಗೆ ಸಂಬಂಧಿಸಿದಂತೆ ಆಕ್ಷೇಪಣೆಗಳನ್ನು ಸಲ್ಲಿಸಲು ಇಚ್ಛಿಸುವ ಅಭ್ಯರ್ಥಿಗಳು ಆಯ್ಕೆಪಟ್ಟಿ ಪ್ರಕಟಗೊಂಡ 15 ದಿನಗಳೊಗಾಗಿ ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಉದ್ಯೋಗ ಸೌಧ, ಬೆಂಗಳೂರು ಇವರಿಗೆ ಸಲ್ಲಿಸಬಹುದಾಗಿದೆ.

ಪಹೊ:ಎನ್‌ಎಸ್:ಜಿಪಿಆರ್.

# ದೊಡ್ಡಬಳ್ಳಾಪುರದಲ್ಲಿ 27ನೇ ಸ್ಕೌಟ್ಸ್ ಮತ್ತು ಗೈಡ್ಸ್ ಜಾಂಬೋರೇಟ್

ಬೆಂಗಳೂರು, ಜನವರಿ 14 (ಕರ್ನಾಟಕ ವಾರ್ತೆ)

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಜನವರಿ 18 ರಂದು 27 ನೇ ಕರ್ನಾಟಕ ರಾಜ್ಯ ಸ್ಕೌಟ್ಸ್-ಗೈಡ್ಸ್ ಜಾಂಬೋರೇಟ್‌ಗೆ ರಾಜ್ಯಪಾಲ ಶ್ರೀ ವಾಜುಭಾಯಿ ರೂಢಬಾಯಿ ವಾಲಾ ಅವರು ಚಾಲನೆ ನೀಡಲಿದ್ದಾರೆಂದು ರಾಜ್ಯ ಸ್ಕೌಟ್ಸ್ ಮತ್ತು ಗೈಡ್ಸ್‌ನ ಮುಖ್ಯ ಆಯುಕ್ತರಾದ ಶ್ರೀ ಪಿ.ಜಿ.ಆರ್. ಸಿಂಧ್ಯಾ ಅವರು ತಿಳಿಸಿದರು.

ಇಂದು ಪತ್ರಕರ್ತರಿಗೆ (ಬೃಹತ್ ಜಾಂಬೋರೇಟ್) ವಿವರ ನೀಡಿದ ಅವರು ದೊಡ್ಡಬಳ್ಳಾಪುರದಲ್ಲಿ ಜನವರಿ 17 ರಿಂದ 23 ರ ವರೆಗೆ ನಡೆಯಲಿರುವ ಕಾರ್ಯಕ್ರಮದ ಆಯೋಜನೆಗೆ ಮುಖ್ಯ ಮಂತ್ರಿಗಳು ನೀಡಿರುವ 20 ಲಕ್ಷ ಧನ ಸಹಾಯದೊಂದಿಗೆ ಸುಮಾರು 125 ಎಕರೆ ಪ್ರದೇಶದಲ್ಲಿ ಟೌನ್‌ಶಿಪ್ ಮಾದರಿಯ ಬೃಹತ್ ಶಿಬಿರವನ್ನು ಸ್ಥಾಪಿಸಲಾಗಿದ್ದು ರಾಜ್ಯಾದ್ಯಂತ 33 ಜಿಲ್ಲೆಗಳಿಂದ ಬರುವ ಸುಮಾರು 4,500 ಮಕ್ಕಳು ಭಾಗವಹಿಸಲಿದ್ದಾರೆ ಎಂದ ಅವರು ಈ ಶಿಬಿರದಲ್ಲಿ ಎನ್.ಸಿ.ಸಿ, ಎನ್.ಎಸ್.ಎಸ್. ಹಾಗೂ ಸಾಹಸ ಕ್ರೀಡೆ ಸಂಸ್ಥೆಗಳ ಮಕ್ಕಳಿಗೂ ಭಾಗವಹಿಸಲು ಅವಕಾಶ ಕಲ್ಪಿಸಲಾಗಿದೆ ಎಂದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪೋಲೀಸ್ ವರಿಷ್ಠಾಧಿಕಾರಿ ಬಿ. ರಮೇಶ್ ಮಾತನಾಡಿ ಶಿಬಿರದ ಬಂದೋಬಸ್ತ್ ಕಾರ್ಯವನ್ನು ಸಮರ್ಪಕವಾಗಿ ಮಾಡಲಾಗಿದ್ದು 7 ಕಿ.ಮಿ. ಸುತ್ತಳತೆ ವ್ಯಾಪ್ತಿಯಲ್ಲಿ ಸಿ.ಸಿ.ಟಿ.ವಿ. ಕ್ಯಾಮರಾಗಳನ್ನು ಅಳವಡಿಸಲಾಗಿದ್ದು ಡಿ.ವೈ.ಎಸ್.ಪಿ. ನೇತೃತದಲ್ಲಿ ಮೇಲುಸ್ತುವಾರಿಗೆ ಕ್ರಮ ಕೈಗೊಳ್ಳಲಾಗಿದೆ. ಮಹಿಳಾ ಪೋಲೀಸ್ ಹಾಗೂ ಹೋಂಗಾರ್ಡ್ಸ್‌ಗಳನ್ನು ನಿಯೋಜಿಸಲಾಗುವುದು ಎಂದು ಹೇಳಿದರು. ಶಿಬಿರದಲ್ಲಿ 24 ಗಂಟೆಗಳ ಕಾಲ ನಿರಂತರ ಅಗ್ನಿಶಾಮಕ, ವೈದ್ಯಕೀಯ, ಬ್ಯಾಂಕ್ ಹಾಗೂ ಪೋಸ್ಟಲ್ ಸೇವೆಯನ್ನು ವ್ಯವಸ್ಥೆ ಮಾಡಲಾಗಿದೆ ಎಂದು ರಾಜ್ಯ ಗೈಡ್ಸ್ ಆಯುಕ್ತರಾದ ಗೀತಾ ನಟರಾಜ್ ಅವರು ತಿಳಿಸಿದರು.

ದೊಡ್ಡಬಳ್ಳಾಪುರ ಶಾಸಕ ಶ್ರೀ ಟಿ. ವೆಂಕಟರಮಣಯ್ಯ ಅವರು ಮಾತನಾಡಿ 1967 ರಲ್ಲಿ ದೊಡ್ಡಬಳ್ಳಾಪುರದಲ್ಲಿ ಜಾಂಬೋರೇಟ್ ನಡೆದಿತ್ತು. ನಂತರ ದಿವಂಗತ ಕೊಂಡಜ್ಜಿ ಬಸಪ್ಪನವರ ಜನ್ಮ ಶತಮಾನೋತ್ಸವದ ಅಂಗವಾಗಿ ಮತ್ತೆ ದೊಡ್ಡಬಳ್ಳಾಪುರದಲ್ಲಿ ಈ ಬಾರಿ ಜಾಂಬೋರೇಟ್ ನಡೆಯುತ್ತಿರುವುದು ಸಂತಸದ ಸಂಗತಿ ಎಂದರು. ಸಾವಿರಾರು ಮಕ್ಕಳಿಗೆ ಸಮಾಜದ ಹಲವು ಆಯಾಮಗಳಲ್ಲಿ ತೊಡಗಿಕೊಳ್ಳಲು ಈ ಕಾರ್ಯಕ್ರಮ ಒಂದು ಉತ್ತಮ ವೇದಿಕೆಯಾಗಿದೆ ಎಂದರು.

ಗೈಡ್ಸ್ ಜಂಟಿ ರಾಜ್ಯ ಕಾರ್ಯದರ್ಶಿಯಾದ ಎಸ್.ಕೆ. ಪ್ರಭಾ ಮಾತನಾಡಿ ಈ ಬೃಹತ್ ಶಿಬಿರದ ಮುಖ್ಯ ಉದ್ದೇಶ ಮಕ್ಕಳಲ್ಲಿ ಶಿಸ್ತು, ವ್ಯಕ್ತಿತ್ವ ವಿಕಸನ ಹಾಗೂ ಸೇವಾ ಮನೋಭಾವ ಬೆಳೆಸುವುದಾಗಿದೆ ಎಂದರು. ಶಿಬಿರದಲ್ಲಿ ದೈಹಿಕ ಚಟುವಟಿಕೆಗಳಾದ ಸಾಹಸ ಕ್ರೀಡೆ ಪಥ ಸಂಚಲನ ವ್ಯಾಯಾಮ ಸೇರಿದಂತೆ ವಿನೋದ ಆಟಗಳು, ಸಾಂಸ್ಕೃತಿಕ ಮೆರವಣಿಗೆ, ಪ್ರತಿಭಾ ಪ್ರದರ್ಶನಗಳನ್ನು ಆಯೋಜಿಸಲಾಗುವುದು ಎಂದ ಅವರು ಸಮಾಜ ಮುಖಿಯಾಗಲು ಮಕ್ಕಳಿಗೆ ಯುವ ಧ್ವನಿ, ಜಿಲ್ಲಾ ದರ್ಶನ ಹಾಗೂ ಗುಡಾರವಾಸದಂತಹ ಪ್ರಾಯೋಗಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದರು.

**1471 ಛಾಯಾಚಿತ್ರಶೀರ್ಷಿಕೆ:**

ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಯ ನೂತನ ವರ್ಷದ (2015) ಕ್ಯಾಲೆಂಡರ್ ಬಿಡುಗಡೆ.

**ಎಡದಿಂದ ಬಲಕ್ಕೆ :** ಶ್ರೀ.ಎ.ಕೆ.ಮೊನ್ನಪ್ಪ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಶ್ರೀ.ಎಸ್.ಆರ್.ಪಾಟೀಲ್ (ಬ್ಯಾಡಗಿ), ಕಾರ್ಯಕಾರಿ ಅಧ್ಯಕ್ಷರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಶ್ರೀ.ಸಿ.ಎಂ. ಇಬ್ರಾಹಿಂ, ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರು, ಶ್ರೀ. ಸಿದ್ದರಾಮಯ್ಯ, ಮಾನ್ಯ ಮುಖ್ಯಮಂತ್ರಿಗಳು, ಶ್ರೀ.ಟಿ.ಎಂ. ವಿಜಯಭಾಸ್ಕರ್, ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ಗ್ರಾ.ಅ. ಮತ್ತು ಪಂ.ರಾಜ್. ಇಲಾಖೆ, ಶ್ರೀ.ಮದನಗೋಪಾಲ್, ಅಪರ ಮುಖ್ಯಕಾರ್ಯದರ್ಶಿ, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.